ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 89
2. ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 13-12-2021 (ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ)
4. ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದ್ದ ನಾಡಪ್ರಭು ಕೆಂಪೇಗೌಡ ಅಧ್ಯಯನ ಪೀಠ ಮತ್ತು ಸಂಶೋಧನಾ ಕೇಂದ್ರದ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ;	ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದಲ್ಲಿ "ನಾಡಪ್ರಭು ಕೆಂಪೇಗೌಡ ಅಧ್ಯಯನ ಕೇಂದ್ರ" ನಿರ್ಮಾಣವನ್ನು ರೂ.50.00 ಕೋಟಿ ವೆಚ್ಚದಲ್ಲಿ ಕೈಗೊಳ್ಳಲು ಬಿಬಿಎಂಪಿಯ ಆಯವ್ಯಯದಲ್ಲಿ ಮೀಸಲಿರಿಸುವ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ. ಅದರಂತೆ, ಕಳೆದ 2017ರ ಸೆಪ್ಟೆಂಬರ್ ನಲ್ಲಿ "ನಾಡಪ್ರಭು ಕೆಂಪೇಗೌಡ ಅಧ್ಯಯನ ಕೇಂದ್ರ" ನಿರ್ಮಾಣಕ್ಕಾಗಿ ಭೂಮಿ ಪೂಜೆ ಮಾಡಲಾಗಿದೆ. ತದನಂತರ, ಸದರಿ ಕಾಮಗಾರಿಯನ್ನು ಕೈಗೊಳ್ಳಲು ಟೆಂಡರ್ ಆಹ್ವಾನಿಸಲಾಗಿದ್ದು, ದಿನಾಂಕ: 24-06-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಗುತ್ತಿಗೆದಾರರಾದ M. Rajendra (M.R. Constructions) ರವರ ಸಂಧಾನಿತ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.38,70,24,316.00 ಗಳಿಗೆ ಹೋಲಿಸಿದಾಗ 5.00% ಅಧಿಕ ಅಂದರೆ ರೂ.40,63,75,531.80 (ಅನ್ವಯವಾಗುವ ಎಲ್ಲ ತೆರಿಗೆಗಳೂ ಸೇರಿದಂತೆ) ಗಳಿಗೆ ಮಿತಿಗೊಳಿಸಿ ಕೆಲವು ಷರತ್ತುಗೊಳಪಟ್ಟು ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಂಎನ್ ವೈ 2021, ದಿನಾಂಕ: 29-06-2021 ರನ್ವಯ ಸದರಿ ಟೆಂಡರ್ ಗೆ ಅನುಮೋದನೆಯನ್ನು ನೀಡಲಾಗಿತ್ತು. ಆದರೆ, ಗುತ್ತಿಗೆದಾರರಾದ M. Rajendra (M.R. Constructions) ರವರು ಸದರಿ ಮೊತ್ತಕ್ಕೆ ಒಪ್ಪದ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಂಎನ್ ವೈ 2021 (ಭಾ-1), ದಿನಾಂಕ: 22-10-2021 ರನ್ವಯ ದಿನಾಂಕ: 29-06-2021ರ ಆದೇಶವನ್ನು ರದ್ದುಪಡಿಸಲಾಗಿದ್ದು, "Construction of Kempegowda Study Center at Bangalore University in ward No.129" ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕೂಡಲೇ ಮರು ಟೆಂಡರ್ ಕರೆಯುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರಿಗೆ ಆದೇಶಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಗೆ ಮರು ಟೆಂಡರ್ ಕರೆಯುವ ಕಾರ್ಯ ಪ್ರಗತಿಯಲ್ಲಿರುತ್ತದೆ.

...2/-

ಆ.	ಸದರಿ ಸಂಶೋಧನಾ ಕೇಂದ್ರದ ಕಾಮಗಾರಿಯನ್ನು ಕಾಲಮಿತಿ ಯಲ್ಲಿ ಪೂರ್ಣಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?	"Construction of Kempegowda Study Center at Bangalore University in ward No.129" ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕೂಡಲೇ ಮರು ಟೆಂಡರ್ ಕರೆಯುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರಿಗೆ ಆದೇಶಿಸಲಾಗಿರುತ್ತದೆ. ಪ್ರಸ್ತುತ ವಿಧಾನ ಪರಿಷತ್ತಿನ ಚುನಾವಣೆಯ ನೀತಿ ಸಂಹಿತೆ ಮುಕ್ತಾಯವಾದ ನಂತರ ಟೆಂಡರ್ ಅಹ್ವಾನಿಸಲು ಬಿಬಿಎಂಪಿ ವತಿಯಿಂದ ಕ್ರಮವಹಿಸಲಾಗುತ್ತದೆ. ಟೆಂಡರ್ ಅನುಮೋದನೆಯ ನಂತರ ನಿಗಧಿತ ಕಾಲಮಿತಿಯಲ್ಲಿ ಉದ್ದೇಶಿತ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತದೆ.

ಸಂಖ್ಯೆ: ನಅಇ 347 ಎಂಎನ್ ವೈ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ